**ದಿವಾಣಿ ನ್ಯಾಯಾಧೀಶರು ಹಾಗೂ ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಗಳು, ಕಲಘಟಗಿ**

**ಸಿ ಸಿ ನಂ. 71/2021**

**ಚಾ.ಸಾ.** 8

**ಪ್ರಾ.ಸಾ.** 2

**ದಿನಾಂಕಃ 09.01.2026 ರಂದು ಸಾಕ್ಷಿಯನ್ನು ಕರೆಸಿ ಪ್ರಮಾಣವಚನ ಬೋಧಿಸಲಾಯಿತು.**

| | |
|---|---|
| ಸಾಕ್ಷಿಯ ಹೆಸರು | ರಾಮಪ್ಪ ಸಿಂಕಿನದಾಸರ |
| ತಂದೆಃ ಗಂಡನ ಹೆಸರು | ಮಾರುತಿಪ್ಪ |
| ಉದ್ಯೋಗ | ಎ ಎಸ್ ಐ ಕಲಘಟಗಿ ಠಾಣೆ |
| ವಯಸ್ಸು | 56 ವರ್ಷ |
| ವಾಸಸ್ಥಳ | ಕಲಘಟಗಿ |

**ಮುಖ್ಯ ವಿಚಾರಣೆಃ ಮಾನ್ಯ ಎಪಿಪಿ ಯವರಿಂದ**

ದಿಃ 21.10.2021 ರಂದು ನಾನು ಎಸ್ ಎಚ್ ಓ ಕರ್ತವ್ಯದಲ್ಲಿದ್ದಾಗ ಚಾಸಾ-1 ರವರು ಬಂದು ನನಗೆ ಮಾಲು ಮತ್ತು ಪಂಚನಾಮೆ ಹಾಗೂ ಆರೋಪಿಯನ್ನು ಹಾಜರುಪಡಿಸಿದ್ದು ಗಣಕೃತ ಮಾಡಿ ನೀಡಿದ ದೂರನ್ನು ಸ್ವೀಕರಿಸಿಕೊಂಡು. ಗುನ್ನಾ ನಂ. 142/2021 ಕಲಂ 32, 34 ಕೆ ಇ ಎ ಕಾಯಿದೆ ಅಡಿಯಲ್ಲಿ ದಾಖಲಿಸಿಕೊಂಡು ಮಾನ್ಯ ನ್ಯಾಯಾಲಯಕ್ಕೆ ಪಿ ಸಿ 436 ರವರ ಮುಖಾಂತರ ಸಲ್ಲಿಸಿರುತ್ತೇನೆ.

ಅದೇ ದಿನ ಮಾನ್ಯ ನ್ಯಾಯಾಲಯಕ್ಕೆ ಪಿ ಎಫ್ ಬರನಮಾಡಿಕೊಂಡು ಸದರಿ ಪಿ ಎಫ್ ನಲ್ಲಿ 180 ಎಮ್ ಎಲ್ ನ ವೋಲ್ಡ ಟವರ್ಸ ವಿಸ್ಕಿ 48 ಟೆಟ್ರಾ ಪಾಕೇಟಗಳು ಒಟ್ಟು 8.6 ಲೀಟರ್ ಎಂದು ನಮೂದು ಮಾಡಿರುತ್ತೆನೆ. ಆರೋಪಿಯನ್ನು ದಸ್ತಗಿರಿ ಮಾಡಿ ಮಾನ್ಯ ನ್ಯಾಯಾಲಯಕ್ಕೆ ಹಾಜರುಪಡಿಸಿದೆನು. ನಂತರ ಚಾಸಾ-4 ಮತ್ತು 5 ರವರ ಸಾಕ್ಷಿ ಹೇಳಿಕೆಯನ್ನು ಪಡೆದುಕೊಂಡು ಸದರಿ ಕಡತಕ್ಕೆ ಅಳವಡಿಸಿಕೊಂಡೆ. ನಂತರ ಮುಂದಿನ ತನಿಖೆಗಾಗಿ ಈ ಪ್ರಕರಣದ ಕಡತವನ್ನು ಚಾಸಾ-9 ರವರಿಗೆ ಹಸ್ತಾಂತರಿಸಿದೆ.

ಸಾಕ್ಷಿಯು ದೂರನ್ನು ನೋಡಿ ಗುರುತಿಸಿದ್ದು ಅದನ್ನು ಈಗಾಗಲೇ ನಿಪಿ1 ಎಂದು, ಅದರ ಮೇಲೆ ಇರುವ ಹಿಂಬರಹ ಮತ್ತು ಸಹಿಯನ್ನು ನಿಪಿ1(ಬಿ) ಮತ್ತು (ಸಿ) ಎಂದು ಗುರುತಿಸಲಾಯಿತು.

ಸಾಕ್ಷಿಯು ಪ್ರಥಮ ವರ್ತಮಾನ ವರದಿಯನ್ನು ನೋಡಿ ಗುರುತಿಸಿದ್ದು ಅದನ್ನು ನಿಪಿ9 ಎಂದು ಗುರುತಿಸಲಾಯಿತು. ಅದರ ಮೇಲೆ ಇರುವ ಸಾಕ್ಷಿಯ ಸಹಿಯನ್ನು ನಿಪಿ9(ಎ) ಎಂದು ಗುರುತಿಸಲಾಯಿತು.

ಸಾಕ್ಷಿಯು ಮಾಲು ಪಟ್ಟಿಯನ್ನು ನೋಡಿ ಗುರುತಿಸಿದ್ದು ಅದನ್ನು ನಿಪಿ10 ಎಂದು, ಅದರ ಮೇಲೆ ಇರುವ ಸಹಿಯನ್ನು ನಿಪಿ10(ಎ) ಎಂದು ಗುರುತಿಸಲಾಯಿತು.

ನ್ಯಾಯಾಲಯದ ಮುಂದೆ ಇರುವ ಮುದ್ದೆಮಾಲನ್ನು ನೋಡಿ ಸಾಕ್ಷಿಯು ಗುರುತಿಸಿದ್ದು ಅದನ್ನು ಮು ಮಾ 1 ನ್ನು ಗುರುತಿಸಲಾಯಿತು.

ನ್ಯಾಯಾಲಯದ ಮುಂದೆ ಇರುವ ವ್ಯಕ್ತಿಯನ್ನು  ನೋಡಿ ಗುರುತಿಸಿದ್ದು ಸದರಿಯವರು ಈ ಪ್ರಕರಣದ ಆರೋಪಿಯನ್ನು ಗುರುತಿಸಿರುತ್ತಾರೆ.

**ಪಾಟೀ ಸವಾಲುಃ ಅಪಾದಿತನ ಪರ ಶ್ರೀ ಎಸ್ ಎಸ್ ಡಿ ವಕೀಲರಿಂದ**

ದಿಃ 21.10.2020 ರಂದು ಬೆಳಿಗ್ಗೆ 10.30 ಗಂಟೆಗೆ ದೂರನ್ನು ಸ್ವೀಕರಿಸಿದೆ. ಬಾತ್ಮಿದಾರರಿಂದ ಬಂದ ಮಾಹಿತಿ ನನಗೆ ಗೊತ್ತು. ಸದರಿ ಮಾಹಿತಿಯು ಬೆಳಿಗ್ಗೆ 9.00 ಗಂಟೆಗೆ ಬಂದಿರಬಹುದು. ಮಾನ್ಯ ನ್ಯಾಯಾಲಯದಿಂದ ಶೋಧನಾ ವಾರಂಟನ್ನು ಪಡೆದಿರುವ ಬಗ್ಗೆ ನಾನು ನೋಡಿಲ್ಲ. ಆರೋಪಿಯನ್ನು ಹಿಡಿದುಕೊಂಡು ಬಂದು ದೂರನ್ನು ನೀಡಿದ್ದು ಸುಳ್ಳು ಎಂದರೆ ಸರಿಯಲ್ಲ. ಗುನ್ನಾ ನಂ. 142/2021 ಕಲಂ 32, 34  ಕೆ ಇ ಎ ಕಾಯಿದೆ ಅಡಿಯಲ್ಲಿ ದಾಖಲಿಸಿಕೊಂಡು ಮಾನ್ಯ ನ್ಯಾಯಾಲಯಕ್ಕೆ ಪಿ ಸಿ 436 ರವರ ಮುಖಾಂತರ ಸಲ್ಲಿಸಿರುತ್ತೇನೆ ಎಂದು ಸುಳ್ಳು ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ. ಠಾಣೆಯ ಒಳಗೆ ಬೇರೆ ಪ್ರಕರಣಕ್ಕೆ ಸಂಬಂಧಪಟ್ಟ ಮುದ್ದೆಮಾಲು ಇತ್ತು ಎಂದರೆ ಸರಿಯಲ್ಲ. ಠಾಣೆಯಲ್ಲಿದ್ದ ಮುದ್ದೆಮಾಲನ್ನು ಈ ಪ್ರಕರಣಕ್ಕೆ ಅಳವಡಿಸಿದ್ದೇನೆ ಎಂದರೆ ಸರಿಯಲ್ಲ. ಚಾಸಾ-4 ಮತ್ತು 5 ರವರ ಯಾವುದೇ ಹೇಳಿಕೆಯನ್ನು ಪಡೆದುಕೊಂಡಿಲ್ಲ ಎಂದರೆ ಸರಿಯಲ್ಲ. ಆರೋಪಿಯ ಯಾವುದೇ ಹೇಳಿಕೆಯನ್ನು ಪಡೆದುಕೊಂಡಿಲ್ಲ ಎಂದರೆ ಸರಿಯಲ್ಲ. ನ್ಯಾಯಾಲಯದ ಮುಂದೆ ಇರುವ ಮುದ್ದೆಮಾಲಿಗೂ ಆರೋಪಿಗೂ ಯಾವುದೇ ಸಂಬಂಧವಿಲ್ಲ ಎಂದರೆ ಸರಿಯಲ್ಲ. ಅಂಕಿ ಸಂಖ್ಯೆಗಾಗಿ ಅಪಾದಿತರ ವಿರುದ್ದ ಸುಳ್ಳು ಪ್ರಕರಣವನ್ನು ದಾಖಲು ಮಾಡಿದ್ದೇನೆ ಅಂದರೆ ಸರಿಯಲ್ಲ.

**ಮರು ವಿಚಾರಣೆ ಇಲ್ಲ.**

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತ ಲೇಖನದ ಮೇರೆಗೆ ಬೆರಳಚ್ಚು ಮಾಡಿಸಲಾಯಿತು)

**ಓ ಹೇ ಕೆ ಸರಿ ಇದೆ,**

**ದಿವಾಣಿ ನ್ಯಾಯಾಧೀಶರು ಹಾಗೂ**

**ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಗಳು, ಕಲಘಟಗಿ.**